ಅ) ಕೊಳ್ಳೇಗಾಲ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೋಮಿಯೋಪತಿ ವಿಭಾಗ ತೆರೆಯಲು ಕ್ರಮ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಡತವು ಯಾವ ಹಂತದಲ್ಲಿದೆ?

ಶ್ರೀಮತಿ ನಫೀಸಾ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು):

ಅ) ಹೌದು.

ಆ) ಪರಿಶೀಲನೆಯಲ್ಲಿದೆ.

ಕೊಳ್ಳೇಗಾಲದಲ್ಲಿರುವ ಮಹದೇಶ್ವರ ಪ್ರಥಮದರ್ಜೆ ಕಾಲೇಜಿನಲ್ಲಿ ಹೆಚ್ಚುವರಿ ವಿಭಾಗಗಳ ಪ್ರಾರಂಭ

2046(2435) ಶ್ರೀ ನಂಜುಂಡಸ್ವಾಮಿ ಜಿ.ಎನ್ (ಕೊಳ್ಳೇಗಾಲ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಳ್ಳೇಗಾಲದಲ್ಲಿರುವ ಮಹದೇಶ್ವರ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎಸ್ಸಿ. ಕಂಪ್ಯೂಟರ್ ಸೈನ್ಸ್ ಮತ್ತು ಬಿ.ಕಾಂ. ಕೋರ್ಸ್‌ಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ವಿಭಾಗಗಳನ್ನು ಪ್ರಾರಂಭಿಸಲು ಸರ್ಕಾರ ಏನು ಕ್ರಮ ಕೈಗೊಂಡಿರುತ್ತದೆ?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) ಹೌದು

ಆ) ದಿನಾಂಕ: 28-8-2002 ಸಂಖ್ಯೆ: ಇಡಿ 180 ಯುಆರ್‌ಪಿ 2002ರ ಸರ್ಕಾರಿ ಆದೇಶದಲ್ಲಿ ಬಿ.ಎಸ್ಸಿ. (ಭೌತಶಾಸ್ತ್ರ, ಗಣಿತಶಾಸ್ತ್ರ, ಕಂಪ್ಯೂಟರ್ ಸೈನ್ಸ್) ಕೋರ್ಸನ್ನು 2003-2004ನೇ ಸಾಲಿನಿಂದ ಪ್ರಾರಂಭಿಸಲು ಅನುಮತಿ ನೀಡಲಾಗಿದೆ. ಬಿ.ಕಾಂ. ಕೋರ್ಸಿನಿಂದಲೇ ಕಾಲೇಜನ್ನು ಪ್ರಾರಂಭಿಸಲಾಗಿತ್ತು. ವಿದ್ಯಾರ್ಥಿಗಳ ಕೊರತೆಯಿಂದ ಸದರಿ ಕೋರ್ಸನ್ನು ಸದ್ಯಕ್ಕೆ ನಡೆಸಲಾಗುತ್ತಿಲ್ಲ.

ಕೊಳ್ಳೇಗಾಲದಲ್ಲಿ ವಾರ್ತಾ ಇಲಾಖೆ ಕಛೇರಿ ಸ್ಥಾಪನೆ ಬಗ್ಗೆ

2047(2436) ಶ್ರೀ ನಂಜುಂಡಸ್ವಾಮಿ ಜಿ.ಎನ್ (ಕೊಳ್ಳೇಗಾಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೊಳ್ಳೇಗಾಲದಲ್ಲಿ ವಾರ್ತಾ ಇಲಾಖೆ ಕಛೇರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಕಛೇರಿ ತೆರೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಾರ್ತಾ ಸಚಿವರು):

ಅ) ಹೌದು.

ಆ) ಸದ್ಯಕ್ಕೆ ಅಲ್ಲಿ ವಾರ್ತಾ ಇಲಾಖೆ ಕಛೇರಿ ತೆರೆಯುವ ಪ್ರಸ್ತಾಪ ಸರ್ಕಾರದ ಮುಂದೆ ಇಲ್ಲ.

ಹುಣಸೂರು ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ರಸ್ತೆಗಳ ನಿರ್ವಹಣೆ

2048(2450) ಶ್ರೀ ಪಾಪಣ್ಣ ವಿ. (ಹುಣಸೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಣಸೂರು ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ 700 ಕಿ.ಮೀ. ಉದ್ದದ ರಸ್ತೆಗಳಿಗೆ 2002-03 ರಲ್ಲಿ ವಾರ್ಷಿಕ ನಿರ್ವಹಣೆಗಾಗಿ ಇಟ್ಟಿದ್ದ 15 ಲಕ್ಷ ರೂಪಾಯಿಗಳನ್ನು ಖರ್ಚುಮಾಡದೆ ಬೇರೆ ಉದ್ದೇಶಕ್ಕೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ತುರ್ತು ರಿಪೇರಿ ಹಾಗೂ ವಾರ್ಷಿಕ ನಿರ್ವಹಣೆ ಇಲ್ಲದೆ ಹಾಳಾಗುತ್ತಿರುವ ರಸ್ತೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ತುರ್ತು ಕ್ರಮವೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಇಲ್ಲ. ಜಿಲ್ಲಾ ಪಂಚಾಯತ್‌ನಿಂದ ಅನುಮೋದನೆಯಾದ ಕ್ರಿಯಾ ಯೋಜನೆಯಂತೆ ರಸ್ತೆ ಅಭಿವೃದ್ಧಿ ಮತ್ತು ದುರಸ್ತಿ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ.

ಆ) ತುರ್ತು ರಿಪೇರಿ ಮತ್ತು ನಿರ್ವಹಣೆ ಅಗತ್ಯವಿರುವ ರಸ್ತೆಗಳನ್ನು ಸರಿಪಡಿಸಲು ರೂ. 36.56 ಲಕ್ಷಗಳ ಕ್ರಿಯಾ ಯೋಜನೆಗೆ ಜಿಲ್ಲಾ ಪಂಚಾಯತ್ ಅನುಮೋದನೆ ನೀಡಿರುತ್ತದೆ. ಇದರಂತೆ ರಸ್ತೆ ದುರಸ್ತಿ ಕೈಗೊಂಡಿದೆ.

ರಾಜ್ಯದಲ್ಲಿ ಗ್ರಂಥಾಲಯಗಳ ಸ್ಥಾಪನೆ

2049(2174) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಗ್ರಂಥಾಲಯ ಸೌಲಭ್ಯ ಒದಗಿಸಿದ ಪಂಚಾಯತ್‌ಗಳ ಸಂಖ್ಯೆ ಎಷ್ಟು;

ಆ) ಇನ್ನು ಎಷ್ಟು ವರ್ಷಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪನೆ ಮಾಡಲಾಗುವುದು;

ಇ) ಗ್ರಂಥಾಲಯಗಳ ಸ್ಥಾಪನೆಗೆ ಸರ್ಕಾರ ವಿಶೇಷವಾದ ಕಾರ್ಯಕ್ರಮವನ್ನೇನಾದರೂ ಹಮ್ಮಿಕೊಂಡಿದೆಯೇ?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) 3251 ಪಂಚಾಯ್ತಿಗಳು

ಆ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ಸ್ಥಾಪನೆ ಮಾಡಲಾಗುವುದು

ಇ) ಇಲ್ಲ

ಬಾಗಲಕೋಟೆ ಜಿಲ್ಲೆಯಲ್ಲಿ ರಾಜೀವಗಾಂಧಿ ಗ್ರಾಮೀಣ ಕುಡಿಯುವ ನೀರಿನ ಯೋಜನೆ

2050(2175) ಶ್ರೀ ಪಾಟೀಲ್ ಜೆ.ಟಿ (ಬೀಳಗಿ) : ಮಾನ್ಯ ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜೀವ್ ಗಾಂಧಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಲ್ಲಿ ಗ್ರಾಮಸ್ಥರು ತಮ್ಮ ಪಾಲಿನ ವಂತಿಗೆ ನೀಡಲು ಮುಂದೆ ಬರದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಯೋಜನೆ ವಿಫಲವಾಗುವುದಿಲ್ಲವೇ: ಗ್ರಾಮಸ್ಥರು ವಂತಿಗೆಯ ಬದಲಿಗೆ ಪರ್ಯಾಯ ಯೋಜನೆಯನ್ನೇನಾದರೂ ಸರಕಾರ ಮಾಡಿದೆಯೇ;